**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪ ಕಮಕನೂರ ಇವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆ ಸಂಖ್ಯೆ:109ಕ್ಕೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ.**

*******

**ವಿಷಯ:** ವಿಧಾನಸೌಧದ ಮುಂದೆ ವಿಶ್ವ ಗುರು ನಿಜಶರಣ ಅಂಬಿಗರ ಚೌಡಯ್ಯನವರ ಮೂರ್ತಿ ಸ್ಥಾಪನೆ ಕುರಿತಂತೆ ಸುಮಾರು 25 ಕ್ಕೂ ಹೆಚ್ಚು ಶಾಸಕರು ಮಾನ್ಯ ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಿರುವ ಹಾಗೂ ಹಿಂದಿನ ಅಧಿವೇಶನದಲ್ಲಿ ಈ ಬಗ್ಗೆ ಆಶ್ವಾಸನೆ ನೀಡಿದ್ದರೂ ಆಶ್ವಾಸನೆ ಭರವಸೆಯಾಗಿ ಉಳಿದಿರುವುದರಿಂದ **ಕೋಲಿ, ಬೆಸ್ತ ಮತ್ತು ಕಬ್ಬಲಿಗ ಸಮಾಜದ ಬಾಂಧವರು** ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿರುವ ಮತ್ತು ಈ ಸಮಾಜದವರನ್ನು ಸರ್ಕಾರ ಕಡೆಗಣಿಸುತ್ತಿರುವರೋ ಎಂಬ ಭಾವನೆ ಈ ಸಮಾಜದವರ ಮೇಲೆ ಮೂಡುತ್ತಿರುವುದನ್ನು ಹೋಗಲಾಡಿಸುವ ಗಂಭೀರ ವಿಷಯದ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:** ಹನ್ನೆರಡನೇ ಶತಮಾನದ ಸಾಮಾಜಿಕ, ಕ್ರಾಂತಿಯ ಹರಿಕಾರರಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರು ಒಬ್ಬರು. ಭಿನ್ನ ಹಾಗೂ ವಿಶಿಷ್ಟ ವ್ಯಕ್ತಿತ್ವ, ನೇರ ನಿರ್ಭೀತ ನುಡಿಗಳಿಗೆ ಪ್ರಸಿದ್ಧರಾದ ಅಂಬಿಗರ ಚೌಡಯ್ಯನವರು ಅಂಬಿಗರ ಚೌಡಯ್ಯ ಎಂಬ ಅಂಕಿತನಾಮದಿಂದಲೇ ವಚನಗಳನ್ನು ರಚಿಸಿರುತ್ತಾರೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಕಸಂವಾಪ್ರ 564 ಕಸಧ 2012, ದಿನಾಂಕ:11.06.2012ರಲ್ಲಿ ಸರ್ಕಾರದ/ ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಜನ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆ ಸ್ಥಾಪಿಸುವುದನ್ನು ನಿರ್ಬಂಧಿಸಲಾಗಿರುತ್ತದೆ. (ಪ್ರತಿಯನ್ನು ಅನುಬಂಧದಲ್ಲಿರಿಸಿದೆ)

ಮುಂದುವರೆದು, ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾದ SLP (C) ಸಂಖ್ಯೆ: 8519/2006 ರ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ:18-01-2013ರಂದು ನೀಡಿರುವ ತೀರ್ಪಿನಲ್ಲಿರುವ ಒಂದು ಅಂಶವು ಈ ಕೆಳಕಂಡಂತೆ ಇರುತ್ತದೆ.

> " ........ State Government shall not grant any permission for installation of any statue or construction of any structure in public roads, pavements, sideways and other public utility places".

ಈ ಹಿನ್ನೆಲೆಯಲ್ಲಿ, ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಪ್ರತಿಮೆಯನ್ನು ವಿಧಾನಸೌಧದ ಮುಂಭಾಗದಲ್ಲಿ ಸ್ಥಾಪನೆ ಮಾಡುವ ಕುರಿತು, ಮಾನ್ಯ ವಿಧಾನ ಪರಿಷತ್ ಸದಸ್ಯರು ದಿನಾಂಕ: 25-05-2024 ರಂದು ಸಲ್ಲಿಸಿರುವ ಮನವಿಯ ಬಗ್ಗೆ ಸರ್ಕಾರದ ಸುತ್ತೋಲೆ ಸಂಖ್ಯೆ ಕಸಂವಾಪ್ರ 564 ಕಸಧ 2012 ದಿ:11.06.2012ರನ್ವಯ ಪರಿಶೀಲಿಸಲಾಗುತ್ತಿದೆ.

ಸಂಖ್ಯೆ: ಕಸಂವಾ 81 ಕವಿಸ 2024

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

ಕರ್ನಾಟಕ ಸರ್ಕಾರ

ಸಂಖ್ಯೆ: ಕಸಂವಾಪ್ರ 564 ಕಸಧ 2012

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:11 6 2012

: ಸುತ್ತೋಲೆ :

ವಿಷಯ: ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಪ್ರತಿಷ್ಠಾಪಿಸುವ ಕುರಿತು ಮಾರ್ಗಸೂಚಿಗಳು

ಸಂತರು, ಶರಣರು, ಸ್ವಾತಂತ್ರ್ಯ ಹೋರಾಟಗಾರರು, ಗಣ್ಯ ವ್ಯಕ್ತಿಗಳು ಮುಂತಾದವರು ದೇಶಕ್ಕಾಗಿ ಸಲ್ಲಿಸಿದ ಸೇವೆ, ತ್ಯಾಗ ಮನೋಭಾವಗಳನ್ನು ಸ್ಮರಿಸುವ ಉದ್ದೇಶದಿಂದ ಅಂತಹವರ ಪ್ರತಿಮೆಗಳನ್ನು ಸರ್ಕಾರಿ ಕಛೇರಿಗಳು, ಸಾರ್ವಜನಿಕ ಪ್ರದೇಶಗಳಲ್ಲಿ ಸ್ಥಾಪನೆ ಮಾಡಲಾಗುತ್ತದೆ, ಆದರೆ ಇಂತಹ ಪ್ರತಿಮೆಗಳನ್ನು ಸಮರ್ಪಕವಾಗಿ ನಿರ್ವಹಿಸದೇ, ಇದ್ದು, ವಿರೂಪಗೊಂಡಿರುವುದು ಇನ್ನಿತರ ಅಹಿತಕರ ಘಟನೆಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ರ: ಪ್ರತಿಮೆಗಳ ಸ್ಥಾಪನೆಗೆ ಸ್ಪಷ್ಟವಾದ ಮಾರ್ಗಸೂಚಿ ಗಳಿಲ್ಲದಿರುವುದನ್ನು ಮನಗಂಡು ಯಾವುದೇ ಸರ್ಕಾರಿ ಜಾಗದಲ್ಲಿ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪನೆ ಮಾಡುವುದು ಸೂಕ್ತವಲ್ಲವೆಂದು ಪರಿಗಣಿಸಿ ಗಣ್ಯವ್ಯಕ್ತಿಗಳ ಪ್ರತಿಮೆಗಳ ಸ್ಥಾಪನೆಗೆ ಸಂಬಂಧಿಸಿದಂತೆ ಕೆಳಗಿನ ಮಾರ್ಗಸೂಚಿಗಳನ್ನು ಹೊರಡಿಸಿದೆ.

(1) ಸರ್ಕಾರದ/ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ದಲಿತ ನಾಯಕರ, ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯ ವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದನ್ನು ನಿರ್ಬಂಧಿಸಿದೆ.

(2) ಪ್ರತಿಮೆ ಸ್ಥಾಪಿಸುವುದಕ್ಕೆ ಸಂಘ ಸಂಸ್ಥೆಗಳು ಮುಂದೆ ಬಂದಲ್ಲಿ ಪ್ರಾಥಮಿಕವಾಗಿ ಅಂತಹ ಸಂಘ ಸಂಸ್ಥೆಗಳು ತಮಗೆ ಸೇರಿದ ನಿವೇಶನದಲ್ಲಿ ಪ್ರತಿಮೆಯನ್ನು ನಿರ್ಮಿಸುವ ಹಾಗೂ ಅವುಗಳ ಭದ್ರತೆ ಮತ್ತು ಸಂರಕ್ಷಣೆಗೆ ಸಂಬಂಧಿಸಿದ್ದಂತೆ ಮುಚ್ಚಳಿಕೆ ನೀಡತಕ್ಕದ್ದು.

(3) ಮಂಜೂರಾತಿ ಪಡೆದು ಸ್ಥಾಪಿಸಲಾದ ಪ್ರತಿಮೆಗಳ ನಿರ್ವಹಣೆಯನ್ನು ಆಯಾ ಸಂಘ ಸಂಸ್ಥೆಗಳೇ ನಿರ್ವಹಿಸತಕ್ಕದ್ದು.

(4) ಪ್ರತಿಮಾ ಸ್ಥಾಪನೆಗೆ ವಿಶೇಷ ಪ್ರಕರಣವಾಗಿ ಸರ್ಕಾರದಿಂದ ನೀಡಲಾಗುವ ಗರಿಷ್ಠ ಅನುದಾನದ ಮೊತ್ತ ರೂ 10 00 ಲಕ್ಷವಾಗಿರುತ್ತದೆ

(ಹೆಚ್.ವಿ ರಾಮಚಂದರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ

ಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಕಂಗೇರಿ ಹೊರವಲಯ ಮುದ್ರಣಾಲಯ, ಬೆಂಗಳೂರು ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು

ಪ್ರತಿ:

1) ಮಹಾಲೇಖಪಾಲರು (ಎ&ಇ) ಕರ್ನಾಟಕ, ಬೆಂಗಳೂರು
2) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4) ಪೋಲೀಸ್ ಮಹಾನಿರ್ದೇಶಕರು, ನೃಪತುಂಗ ರಸ್ತೆ, ಬೆಂಗಳೂರು
5) ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
6) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7) ಪೋಲೀಸ್ ಆಯುಕ್ತರು, ಬೆಂಗಳೂರು ನಗರ, ಇನ್‌ಫ್ಯಾಂಟ್ರಿ ರಸ್ತೆ, ಬೆಂಗಳೂರು
8) ಎಲ್ಲಾ ಜಿಲ್ಲಾಧಿಕಾರಿಗಳು
9) ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು
10) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
11) ಆಯುಕ್ತರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಬೆಂಗಳೂರು
12) ನಿರ್ದೇಶಕರು, ವಾರ್ತಾ ಇಲಾಖೆ, ಬೆಂಗಳೂರು [ಪತ್ರಿಕಾ ಪ್ರಕಟಣೆಗಾಗಿ]
13) ಎಲ್ಲಾ ಮಾನ್ಯ ಸಚಿವರ ಆಪ್ತಕಾರ್ಯದರ್ಶಿಗಳು
14) ಸರ್ಕಾರದ ಕಾರ್ಯದರ್ಶಿಗಳು/ಉಪಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಇಲಾಖೆ, ವಿಕಾಸಸೌಧ, ಬೆಂಗಳೂರು
15) ಪತ್ರಿಕಾ ಮೇಜು
16) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು